# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 790 |
| ಮಾನ್ಯ ವಿಧಾನ ಪರಿಷತ್ತಿನ ಸದಸ್ಯರ ಹೆಸರು | : | ಶ್ರೀ ಸಲೀಂ ಅಹಮದ್(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | : | 20.09.2022 |
| ಉತ್ತರಿಸುವವರು | : | ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ಸಚಿವರು |

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| ಅ. | ಸರ್ಕಾರದ ಅಧೀನದಲ್ಲಿರುವ ವಿಶೇಷ ಚೇತನರ ಹಕ್ಕುಗಳ ಅಧಿನಿಯಮದ ರಾಜ್ಯ ಆಯುಕ್ತರಾಗಿ ಕಾರ್ಯನಿರ್ವಹಿಸುತ್ತಿರುವ ಆಯುಕ್ತರು ಯಾರು; | ಪ್ರಸ್ತುತ ಶ್ರೀಮತಿ ಕೆ.ಎಸ್. ಲತಾಕುಮಾರಿ, ಐ.ಎ.ಎಸ್, ನಿರ್ದೇಶಕರು, ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ಇವರು ಅಂಗವಿಕಲ ವ್ಯಕ್ತಿಗಳ ಹಕ್ಕುಗಳ ಅಧಿನಿಯಮ ಆಯುಕ್ತರ ಹುದ್ದೆಯಲ್ಲಿ ಹೆಚ್ಚುವರಿ ಪ್ರಭಾರದಲ್ಲಿ ಕಾರ್ಯನಿರ್ವಹಿಸುತ್ತಿದ್ದಾರೆ. |
| ಆ. | ಕಳೆದ 3 ವರ್ಷದಿಂದ ರಾಜ್ಯ ಆಯುಕ್ತರ ಹುದ್ದೆ ಖಾಲಿ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ ಖಾಲಿ ಇಡಲು ಕಾರಣವೇನು? | ರಾಜ್ಯ ಆಯುಕ್ತರ ಹುದ್ದೆ ಕಳೆದ ಒಂದೂವರೆ ವರ್ಷಗಳಿಂದ ಖಾಲಿ ಇದ್ದು, ಈ ಹುದ್ದೆಯನ್ನು ತುಂಬುವ ಪ್ರಕ್ರಿಯೆ ಚಾಲ್ತಿಯಲ್ಲಿರುತ್ತದೆ. |
| ಇ. | ಪ್ರಸ್ತುತ ರಾಜ್ಯದಲ್ಲಿ ದಿವ್ಯಾಂಗರ ಮೇಲೆ ದಿನನಿತ್ಯ ನಾನಾ ರೀತಿಯ ದೌರ್ಜನ್ಯಗಳು ನಡೆಯುತ್ತಿದ್ದು, ಸವಲತ್ತುಗಳ ಕೊರತೆ ಇದ್ದರೂ, ಸ್ಪಂದಿಸುವ ಧ್ವನಿ ಇಲ್ಲದಂತಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ? ಈ ಹುದ್ದೆಗೆ ಎಷ್ಟು ಅರ್ಜಿಗಳು ಬಂದಿರುತ್ತವೆ. ಬಂದಿರುವ ಅರ್ಜಿಗಳಲ್ಲಿ ಈ ಹುದ್ದೆಗೆ ಸೂಕ್ತ ವ್ಯಕ್ತಿಗಳಿಲ್ಲವೇ; ಹಾಗಿದ್ದಲ್ಲಿ ಇವರ ಕುಂದುಕೊರತೆಗಳನ್ನು ಆಲಿಸುವವರು ಯಾರು? | ನಿರ್ದೇಶಕರು, ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ರವರು ಅಂಗವಿಕಲ ವ್ಯಕ್ತಿಗಳ ಅಧಿನಿಯಮ ಕಚೇರಿಯ ರಾಜ್ಯ ಆಯುಕ್ತರ ಹುದ್ದೆಯಲ್ಲಿ ಕಾರ್ಯ ನಿರ್ವಹಿಸುತ್ತಿದ್ದು, ವಿಕಲಚೇತನ ವ್ಯಕ್ತಿಗಳಿಂದ ಬರುವ ಅರ್ಜಿಗಳಿಗೆ ಮತ್ತು ಅವರ ಸಮಸ್ಯೆಗಳಿಗೆ ಸಕಾಲದಲ್ಲಿ ಸ್ಪಂದಿಸಲಾಗುತ್ತಿದೆ.<br><br>ಆಯುಕ್ತರ ಹುದ್ದೆಗೆ ನಿಗದಿತ ಅವಧಿಯೊಳಗೆ ಸ್ವೀಕೃತವಾದ ಅರ್ಜಿಗಳ ಸಂಖ್ಯೆ: 47, ಆಯ್ಕೆ ಪ್ರಕ್ರಿಯೆಯು ಚಾಲ್ತಿಯಲ್ಲಿರುತ್ತದೆ. |
| ಈ. | ಈ ಕಾರಣದಿಂದ 2016ರ ವಿಶೇಷ ಚೇತನರ ಕಾಯಿದೆ ಅಡಿ ಹಕ್ಕು ಜಾಗೃತಿ, ಅವರ ಸಬಲೀಕರಣಕ್ಕೆ ಕ್ರಮ ವಹಿಸಲು ಶಾಲಾ ಪಠ್ಯಗಳಲ್ಲಿ ವಿಶೇಷ ಚೇತನರ ಹಕ್ಕುಗಳ ಪಾಠ ಅಳವಡಿಸಿಕೊಳ್ಳುವ ಕಾರ್ಯದಲ್ಲಿ ತೀವ್ರ ಹಿನ್ನಡೆಯಾಗಿದ್ದು, ಇದರ ನಿವಾರಣೆಗೆ ಸರ್ಕಾರ ಕೈಗೊಂಡ ಕ್ರಮವೇನು? | ಅಂಗವಿಕಲ ವ್ಯಕ್ತಿಗಳ 2016ರ ಬಗ್ಗೆ ಜಾಗೃತಿ ಮೂಡಿಸಲು ಶಾಲಾ ಪಠ್ಯಗಳಲ್ಲಿ ಪಾಠ ಅಳವಡಿಸುವ ಬಗ್ಗೆ ಈಗಾಗಲೇ ಕ್ರಮ ಕೈಗೊಳ್ಳಲಾಗಿದ್ದು, ಮುಂದಿನ ಶೈಕ್ಷಣಿಕ ವರ್ಷದ ಪಠ್ಯ ಕ್ರಮದಲ್ಲಿ ಮಾಹಿತಿಯನ್ನು ಅಳವಡಿಸಿಕೊಳ್ಳುವ ಪ್ರಕ್ರಿಯೆ ಚಾಲ್ತಿಯಲ್ಲಿರುತ್ತದೆ. |

**ಸಂಖ್ಯೆ: ಮಮಇ 208 ಪಿಹೆಚ್‌ಪಿ 2022**

Halappa

(ಆಚಾರ ಹಾಲಪ್ಪ ಬಸಪ್ಪ)
ಗಣಿ ಮತ್ತು ಭೂ ವಿಜ್ಞಾನ ಹಾಗೂ
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ
ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ
ಇಲಾಖೆ ಸಚಿವರು